# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್ -ಇವರ ವಿರುದ್ಧ ಶಿಸ್ತುಕ್ರಮ ಜರುಗಿಸುವ ಬಗ್ಗೆ.**

ಓದಲಾಗಿದೆ:

01. ಸಮಸಂಖ್ಯೆಯ ಸರ್ಕಾರಿ ಆದೇಶ, ದಿನಾಂಕ: 18.02.2011.
02. ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ: 23.03.2011.
03. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಡಿಟಿಇ 45 ಡಿಇಕ್ಯೂ (1) 2010/399, ದಿನಾಂಕ: 26-04-2011.
04. ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ: 27.06.2011.
05. ಸಮಸಂಖ್ಯೆಯ ಸರ್ಕಾರಿ ಆದೇಶ, ದಿನಾಂಕ: 29.02.2012.
06. ಪ್ರಕರಣದ ವಿಚಾರಣಾಧಿಕಾರಿಗಳ ವರದಿ, ದಿನಾಂಕ: 02.05.2012.
07. ಶ್ರೀ.ಗೋವಿಂದರಾಜು., ಪ್ರಾಂಶುಪಾಲರು,, ರವರ ಮನವಿ, ದಿನಾಂಕ: 07.10.2014.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಹಾಗೂ ಮತ್ತಿತರರಿಂದ ಪತ್ರ/ದೂರು ಅರ್ಜಿಗಳು ಸ್ವೀಕೃತವಾಗಿದ್ದುದರಿಂದ, ಸದರಿ ಸಂಸ್ಥೆಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶ್ರೀ.ಗೋವಿಂದರಾಜು., ರವರನ್ನು ಕರ್ತವ್ಯದಿಂದ ಅಮಾನತ್ತುಗೊಳಿಸುವಂತೆ ತಾಂತ್ರಿಕ ಶಿಕ್ಷಣ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿರುತ್ತದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಸರ್ಕಾರದ ಪತ್ರದಲ್ಲಿ ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಅನುವಾಗುವಂತೆ ಸದರಿಯವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ತಾಂತ್ರಿಕ ಶಿಕ್ಷಣ ನಿರ್ದೇಶಕರನ್ನು ಕೋರಲಾಗಿ, ಮೇಲೆ ಓದಲಾದ ಕ್ರಮಸಂಖ್ಯೆ (3)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ವಿಜಯಪುರ-ಇವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (4)ರ ಸರ್ಕಾರದ ಪತ್ರದಲ್ಲಿ ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ವಿರುದ್ಧ ಸಲ್ಲಿಸಲಾಗಿರುವ ದೋಷಾರೋಪಣಾ ಪಟ್ಟಿಯಲ್ಲಿನ ಆರೋಪಗಳನ್ನು ಕುರಿತಂತೆ ಸಮಜಾಯಿಷಿಯನ್ನು ನೀಡುವಂತೆ ಶ್ರೀ.ಗೋವಿಂದರಾಜು., ರವರಿಗೆ ನೋಟೀಸನ್ನು ಜಾರಿಗೊಳಿಸಲಾಗಿತ್ತು. ಆದರೆ ಸದರಿ ನೋಟೀಸಿಗೆ ಶ್ರೀ.ಗೋವಿಂದರಾಜು., ರವರಿಂದ ಯಾವುದೇ ಉತ್ತರ ಸ್ವೀಕೃತವಾಗಿರುವುದಿಲ್ಲವಾದ್ದರಿಂದ ಸದರಿಯವರ ವಿರುದ್ಧದ ಆರೋಪಗಳ ಕುರಿತಂತೆ ವಿಚಾರಣೆಯನ್ನು ನಡೆಸಲು ಮೇಲೆ ಓದಲಾದ ಕ್ರಮಸಂಖ್ಯೆ (5)ರ ಸರ್ಕಾರದ ಆದೇಶದಲ್ಲಿ ಸರ್ಕಾರವು ಶ್ರೀ.ಎ.ಎಂ.ಪತ್ತಾರ., ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹುಬ್ಬಳ್ಳಿ-ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಿ ಪ್ರಕರಣದ ವಿಚಾರಣೆಯನ್ನು ನಡೆಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಆದೇಶಿಸಿರುತ್ತದೆ.

ಮೇಲೆ ಓದಲಾದ ಕ್ರಮಸಂಖ್ಯೆ (6)ರ ಪತ್ರದಲ್ಲಿ ಪ್ರಕರಣದ ವಿಚಾರಣಾಧಿಕಾರಿಗಳಾದ ಶ್ರೀ.ಎ.ಎಂ. ಪತ್ತಾರ., ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹುಬ್ಬಳ್ಳಿ-ಇವರು ನಡೆಸಿದ ವಿಚಾರಣೆಯ ಅಂತಿಮ

1/6/15

ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ವಿರುದ್ಧದ ಆರೋಪಗಳು ಸಾಬೀತಾಗಿರುವುದಾಗಿ ವರದಿಯಲ್ಲಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (6)ರಲ್ಲಿ ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ಪ್ರಕರಣದ ವಿಚಾರಣಾಧಿಕಾರಿಗಳು ಸದರಿಯವರ ವಿರುದ್ಧ ಮಾಡಲಾಗಿರುವ ಆರೋಪಗಳು ಸಾಬೀತಾಗಿರುವುದಾಗಿ ತಿಳಿಸಿರುವ ಹಿನ್ನೆಲೆಯಲ್ಲಿ ತಮ್ಮ ವಿರುದ್ಧ ಏಕೆ ಶಿಸ್ತುಕ್ರಮ ಕೈಗೊಳ್ಳಬಾರದೆಂದು ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರಿಗೆ 02ನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಸರ್ಕಾರದ ಸದರಿ ನೋಟೀಸಿಗೆ ಮೇಲೆ ಓದಲಾದ ಕ್ರಮಸಂಖ್ಯೆ (7)ರಲ್ಲಿ ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ, ತಮ್ಮ ವಿರುದ್ಧ ಹೊರಿಸಲಾದ ಆರೋಪಗಳನ್ನು ತಾವು ಒಪ್ಪಿಕೊಂಡಿದ್ದು, ತಾವು ಉದ್ದೇಶಪೂರ್ವಕವಾಗಿ ಈ ತಪ್ಪುಗಳನ್ನು ಮಾಡಿಲ್ಲವೆಂದೂ, ಈ ಒಂದು ಬಾರಿಗೆ ತಮ್ಮ ಅಪರಾಧವನ್ನು ಕ್ಷಮಿಸಿ ಇನ್ನು ಮುಂದೆ ಸುಸೂತ್ರವಾಗಿ ಕರ್ತವ್ಯ ನಿರ್ವಹಿಸಿಕೊಂಡು ಹೋಗಲು ತಮಗೆ ಅವಕಾಶ ಕಲ್ಪಿಸಿಕೊಡಬೇಕೆಂದೂ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 38 ಡಿಟಿಇ 2011,**
**ಬೆಂಗಳೂರು, ದಿನಾಂಕ: 19ನೇ ಮೇ 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ, ಶ್ರೀ.ಗೋವಿಂದರಾಜು., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರು ಈ ಹಿಂದೆ ಸರ್ಕಾರಿ ಪಾಲಿಟೆಕ್ನಿಕ್, ವಿಜಯಪುರದಲ್ಲಿ ಪ್ರಾಂಶುಪಾಲರಾಗಿ ಕರ್ತವ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿದ್ದರೂ ಸಹ ಸದರಿ ಅಧಿಕಾರಿಯು ನೀಡಿರುವ ಲಿಖಿತ ಹೇಳಿಕೆಯನ್ನು ಸರ್ಕಾರವು ಪರಿಗಣಿಸಿ, ಭವಿಷ್ಯದಲ್ಲಿ ಈ ರೀತಿಯ ವರ್ತನೆಯನ್ನು ಪುನರಾವರ್ತಿಸಬಾರದೆಂದು ಎಚ್ಚರಿಕೆ ನೀಡಿ ಪ್ರಕರಣದಲ್ಲಿ ಮುಂದಿನ ಕ್ರಮವಹಿಸುವುದರಿಂದ ಕೈಬಿಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
19/5/15
(ಬಿ.ನಾಗಭೂಷಣ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).
19/05/2015

**ಗೆ:**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್/ವಿಜಯಪುರ (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮುಖಾಂತರ).
3. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ (ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ಮುಖಾಂತರ).
4. ಶಾಖಾ ರಕ್ಷಾ ಕಡತ : ಹೆಚ್ಚಿನ ಪ್ರತಿ.

**ಹಿಂಬರಹ ಸಂಖ್ಯೆ:** ಡಿಟಿಇ 12 ಡಿಇಕ್ಯೂ(1) 2008/ಭಾಗ-2 /680 ದಿನಾಂಕ: 01/06/2015

ಸರ್ಕಾರದ ಆದೇಶ ಸಂಖ್ಯೆ: ಇಡಿ/38/ಡಿಟಿಇ/2011, ದಿನಾಂಕ: 19/05/2015ನ್ನು ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾಳಗಿ ಇವರ ಮುಖಾಂತರ ಶ್ರೀ.ಗೋವಿದಂರಾಜು, ಪ್ರಿನ್ಸಿಪಾಲರು(ನಿವೃತ್ತ) ಇವರಿಗೆ ಕಳುಹಿಸಲಾಗಿದೆ.

**ಪ್ರತಿ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ**

1. ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ಮುಖ್ಯಮಂತ್ರಿಗಳ ಪತ್ರಿಕಾ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
4. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾಳಗಿ.
5. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್/ವಿಜಯಪುರ
6. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ (ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, [illegible] ಇವರ ಮುಖಾಂತರ)
7. ಜಂಟಿನಿರ್ದೇಶಕರು,(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
9. ನಿರ್ದೇಶಕರ ಆಪ್ತಶಾಖೆಗೆ ಮಾಹಿತಿಗಾಗಿ.
10. ಇ–ಆಡಳಿತ ವಿಭಾಗ, ಸದರಿ ಆದೇಶವನ್ನು ಇಲಾಖಾ ವೆಬ್‌ಸೈಟ್ ಅಳವಡಿಸುವ ಸೂಕ್ತ ಕ್ರಮಕ್ಕಾಗಿ.
11. ಇಎಸ್‌ಟಿ(1)ಎ, ಇಎಸ್‌ಟಿ(9), ಇಎಸ್‌ಟಿ(7), ನಿರ್ದೇಶನಾಲಯ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.